# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 195 (226) |
| 2. | ಸದಸ್ಯರ ಹೆಸರು | : | ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 14.12.2021 |
| 4. | ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಡೆಚೂರ, ಬಾಡಿಯಾಳ ಕೈಗಾರಿಕಾ ಪ್ರದೇಶ ಯಾದಗಿರಿ ಇಲ್ಲಿ ಫಾರ್ಮಾಸಿಟಿಕಲ್ ಪಾರ್ಕ್‌ನ್ನು ಯಾವಾಗ ಪ್ರಾರಂಭಿಸಲಾಯಿತು; | ಕಡೇಚೂರು ಕೈಗಾರಿಕಾ ಪ್ರದೇಶಕ್ಕಾಗಿ ಯಾದಗಿರಿ ಜಿಲ್ಲೆ, ಕಡೇಚೂರು ಮತ್ತು ಬಾಡಿಯಾಳ ಗ್ರಾಮಗಳ ಒಟ್ಟು 3298-29 ಎಕರೆ ವಿಸ್ತೀರ್ಣವನ್ನು ಭೂಸ್ವಾಧೀನಪಡಿಸಿದ್ದು, ಮೊದಲನೇ ಹಂತದಲ್ಲಿ 1520 ಎಕರೆ ವಿಸ್ತೀರ್ಣದಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಉಳಿಕೆ 1500 ಎಕರೆ ವಿಸ್ತೀರ್ಣವನ್ನು Bulk Drug ಪಾರ್ಕ್‌ಗಾಗಿ ಕಾಯ್ದಿರಿಸಲಾಗಿದ್ದು, ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. |
| (ಆ) | ಫಾರ್ಮಾಸಿಟಿಕಲ್ ಪಾರ್ಕ್ ಸಂಪೂರ್ಣವಾಗಿ ಪ್ರಾರಂಭವಾಗಿದೆಯೇ; ಸಂಪೂರ್ಣವಾಗಿ ಪ್ರಾರಂಭವಾಗದಿದ್ದಲ್ಲಿ ವಿಳಂಬಗೊಳ್ಳುತ್ತಿರುವುದಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; (ವರದಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು) | ಕಡೇಚೂರು ಕೈಗಾರಿಕಾ ಪ್ರದೇಶದ 2ನೇ ಹಂತದಲ್ಲಿ Bulk Drug ಪಾರ್ಕ್‌ಗಾಗಿ ರೂ.1478.00 ಕೋಟಿಗಳಿಗೆ ಕರಡು ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದ್ದು, ಪ್ರಸ್ತಾಪಿತ ಯೋಜನೆಗೆ ಕೇಂದ್ರ ಸರ್ಕಾರದ ರೂ.1000.00 ಕೋಟಿ ಹಾಗೂ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ರೂ.478.00 ಕೋಟಿಗಳಿಗೆ ನಿಗಧಿಪಡಿಸಲಾಗಿದ್ದು, ಈ ಯೋಜನೆಗೆ ಕೇಂದ್ರ ಸರ್ಕಾರದ ಅನುಮೋದನೆ ದೊರೆತ ನಂತರ ಹಾಗೂ ಕ್ರಿಯಾ ಯೋಜನೆಗೆ ಕೇಂದ್ರ ಸರ್ಕಾರವು ಅನುದಾನವನ್ನು ಬಿಡುಗಡೆ ಮಾಡಿದ ನಂತರ, ಕೇಂದ್ರ ಸರ್ಕಾರದ ಮಾರ್ಗದರ್ಶನದಂತೆ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತದೆ. |

| | | |
|---|---|---|
| (ಇ) | ಈ ಫಾರ್ಮಾಸಿಟಿಕಲ್ ಪಾರ್ಕ್‌ಗೆ ಎಷ್ಟು ಎಕರೆ ಜಮೀನು ಮೀಸಲಿಸಲಾಗಿದೆ; | Bulk Drug Parkಗಾಗಿ ಕಡೇಚೂರು ಕೈಗಾರಿಕಾ ಪ್ರದೇಶದಲ್ಲಿ 1500 ಎಕರೆ ವಿಸ್ತೀರ್ಣವನ್ನು ಕಾಯ್ದಿರಿಸಲಾಗಿದೆ. |
| (ಈ) | ಫಾರ್ಮಾಸಿಟಿಕಲ್ ಪಾರ್ಕ್‌ಗೆ ಸಂಬಂಧಿಸಿದಂತೆ ಭೂಮಿ ಖರೀದಿಗೆ ಒಂದು ಎಕರೆ ಜಮೀನಿಗೆ ಆಯಾ ವಾರಸುದಾರರಿಗೆ ನಿಗದಿಪಡಿಸಲಾದ ಮೊತ್ತ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು) | ಪ್ರತಿ ಎಕರೆಗೆ ರೂ.6.00 ಲಕ್ಷಗಳಂತೆ ಭೂಪರಿಹಾರವನ್ನು ನಿಗಧಿಪಡಿಸಲಾಗಿದ್ದು, ಇದುವರೆವಿಗೂ 2984 ಎಕರೆ ಜಮೀನಿಗೆ ಭೂಪರಿಹಾರ ಪಾವತಿಸಲಾಗಿದೆ.<br>ಉಳಿಕೆ ಜಮೀನಿನ ಭೂಪರಿಹಾರ ಪಾವತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. |

ಸಂಖ್ಯೆ: ಸಿಐ 233 ಐಎಪಿ (ಇ) 2021

(ಮುರುಗೇಶ ಆರ್. ನಿರಾಣಿ)

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು